ಕರ್ನಾಟಕ ಸರ್ಕಾರ

ಸಾರ್ವಜನಿಕ ಶಿಕ್ಷಣ ಇಲಾಖೆಯ, ಆಯುಕ್ತರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು-01

ಸಂಖ್ಯೆ; ಜಂ.ನಿ(ಆಡಳಿತ) ಖಾಯಂ.ಪೂ.ಸೇ.ಘೋ/1/2021-22 ದಿನಾಂಕ:18/02/2022

: ಜ್ಞಾಪನ :

ವಿಷಯ:- ರಾಜ್ಯದ ಎಲ್ಲಾ "ಸಿ' ದರ್ಜೆಯ ನೌಕರರ ಕಾರ್ಯಕ್ಷಮತೆ ಹಾಗೂ ವಿಷಯ ಪರಿಣಿತಿಯ ಕುರಿತು ಲಿಖಿತ ಪರೀಕ್ಷೆಯ ಆಧಾರದ ಮೇಲೆ ಖಾಯಂ ಪೂರ್ವ ಸೇವಾವಧಿ ಘೋಷಿಸುವ ಕುರಿತು.

ಉಲ್ಲೇಖ:- 1.ಈ ಕಛೇರಿ ಸುತ್ತೋಲೆ ಸಂಖ್ಯೆ:ಸಿ5(7) ಖಾ.ಪೋ.ಸೇ.ಘೋ.ಕು:2021-22 ದಿನಾಂಕ:04-01-2022.
2. ಕಾರ್ಯದರ್ಶಿಗಳು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ ಹಾಗೂ ಪದನಿಮಿತ್ತ ಸಹನಿರ್ದೇಶಕರು, ಬೆಳಗಾವಿ ವಿಭಾಗ ಬೆಳಗಾವಿ ಇವರ ಪತ್ರ ಸಂಖ್ಯೆ: ಎ1/ಖಾ.ಪೂ.ಸೇ.ಘೋ.ಕು/705/2021-22 ದಿನಾಂಕ:17-02-2022.

@@@@@

, ಉಲ್ಲೇಖ-(1)ರ ಈ ಕಛೇರಿ ಸುತ್ತೋಲೆಯಲ್ಲಿ ರಾಜ್ಯದ ಎಲ್ಲಾ ಬೋಧಕೇತರ ವೃಂದದ ಗ್ರೂಪ್ "ಸಿ" ನೌಕರರ ಖಾಯಂ ಪೂರ್ವ ಸೇವಾ ಅವಧಿ ಘೋಷಣೆ ಮಾಡುವ ಕುರಿತಂತೆ, ಕಡ್ಡಾಯವಾಗಿ ವೃತ್ತಿ ಬುನಾದಿ ಹಾಗೂ ಇತರೆ ತರಬೇತಿಗಳಿಗೆ ನಿಯೋಜಿಸುವುದು ಹಾಗೂ ನಿಯಮಾನುಸಾರ ಎಲ್ಲಾ ಇಲಾಖಾ ಪರೀಕ್ಷೆಗಳನ್ನು ಉತ್ತೀರ್ಣರಾದ ನೌಕರರಿಗೆ ಕಾರ್ಯಕ್ಷಮತೆ ಹಾಗೂ ವಿಷಯ ಪರಿಣಿತಿ ಕುರಿತು ವಿಭಾಗ ಮಟ್ಟದ ಜಂಟಿ ನಿರ್ದೇಶಕರುಗಳು ಪ್ರತಿ ಮಾಹೆ 100 ಅಂಕಗಳಿಗೆ ಪರೀಕ್ಷೆಯನ್ನು ನಡೆಸಬೇಕು ಮತ್ತು ಫಲಿತಾಂಶವನ್ನು ಖಾಯಂ ಪೂರ್ವ ಸೇವಾವಧಿ ಘೋಷಣೆ ಮಾಡುವ ಪ್ರಾಧಿಕಾರಕ್ಕೆ ಕಳುಹಿಸುವುದು. ಆಡಳಿತಾತ್ಮಕ ಹಿತದೃಷ್ಟಿಯಿಂದ ಮೇಲಿನ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವುದು ಎಂದು ತಿಳಿಸಲಾಗಿತ್ತು.

ಉಲ್ಲೇಖ-02ರಲ್ಲಿ ಕಾರ್ಯದರ್ಶಿಗಳು, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ ಹಾಗೂ ಪದನಿಮಿತ್ತ ಸಹನಿರ್ದೇಶಕರು, ಬೆಳಗಾಗಿ ವಿಭಾಗ ಬೆಳಗಾವಿ, ಇವರು ಪ್ರಶ್ನೆ ಪತ್ರಿಕೆ ತಯಾರಿ ಕಾರ್ಯವು ನಡೆದಿದ್ದು, ಸದರಿ ಮುದ್ರಣಕ್ಕೆ ಅನುದಾನ ಒದಗಿಸುವಂತೆ, 100 ಅಂಕಗಳ ಪ್ರಶ್ನೆ ಪತ್ರಿಕೆಗೆ ಉತ್ತರಿಸಲು ನೀಡಬೇಕಾದ ಸಮಯ ಹಾಗೂ ಉತ್ತೀರ್ಣತೆಗೆ ನಿಗದಿಪಡಿಸಬಹುದಾದ ಅಂಕಗಳ ಬಗ್ಗೆ ಮಾರ್ಗದರ್ಶನ ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ ಈ ಮುಂದಿನಂತೆ ಕ್ರಮವಹಿಸಲು ಎಲ್ಲಾ ಪರೀಕ್ಷಾ ಪ್ರಾಧಿಕಾರಿಗಳಿಗೆ ಸೂಚಿಸಿದೆ.

1. ಪ್ರಶ್ನೆ ಪತ್ರಿಕೆ ಮುದ್ರಣಕ್ಕೆ ಕನಿಷ್ಟ ವೆಚ್ಚ ತಗುಲಲಿದ್ದು, ಕಛೇರಿ ಸಾದಿಲ್ವಾರು, ವೆಚ್ಚದಿಂದ ಭರಿಸುವುದು.
2. 100 ಅಂಕಗಳ ಪ್ರಶ್ನೆ ಪತ್ರಿಕೆ ಗೆ ಉತ್ತರಿಸಲು 3. ಗಂಟೆಗಳ ಸಮಯಾವಕಾಶ ನಿಗದಿಪಡಿಸಿದೆ.
3. ಅಭ್ಯರ್ಥಿಗಳ ಉತ್ತೀರ್ಣತೆಗೆ ಶೇ.50% ಅಂಕ ನಿಗದಿಪಡಿಸಿದೆ.

R 21/02/2022.

ಡಾ.ವಿಶಾಲ್.ಆರ್.,ಭಾ.ಆ.ಸೇ

ಆಯುಕ್ತರು.

ಗೆ,

1. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರು. ರವರಿಗೆ
2. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ನಿರ್ದೇಶಕರುಗಳಿಗೆ.
3. ರಾಜ್ಯದ ಎಲ್ಲಾ ವಿಭಾಗೀಯ ಸಹನಿರ್ದೇಶಕರು, ರವರಿಗೆ ನಿಯಮಾನುಸಾರ ಅಗತ್ಯ ಕ್ರಮಕ್ಕಾಗಿ.
4. ಜಂಟಿ ನಿರ್ದೇಶಕರು,( ಕಾರ್ಯಕ್ರಮ ) ರಾಜ್ಯ ಯೋಜನಾ ನಿರ್ದೇಶಕರ ಕಛೇರಿ, ಸಮಗ್ರ ಶಿಕ್ಷಣ ಕರ್ನಾಟಕ ಬೆಂಗಳೂರು. ರವರಿಗೆ.
5. ರಾಜ್ಯದ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ.
6. ಕಛೇರಿ ಪ್ರತಿ.